ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 29ನೇ ಸೆಪ್ಟಂಬರ್, 2020

ಗಣಿಗಾರಿಕೆಯ ಸಮಸ್ಯೆಗಳ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :-

1005(1042) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಗಣಿಗಾರಿಕೆಯಿಂದ ಬಾಧಿತಗೊಂಡಿರುವ ಜಿಲ್ಲೆಗಳ ಪುನಶ್ಚೇತನ ಮತ್ತು ಅಭಿವೃದ್ಧಿಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ರಾಜ್ಯದಲ್ಲಿ ಗಣಿಗಾರಿಕೆಯಿಂದ ಭಾದಿತಗೊಂಡಿರುವ ಜಿಲ್ಲೆಗಳು ಯಾವುವು ;

(ಆ) ಅಕ್ರಮ ಗಣಿಗಾರಿಕೆಯನ್ನು ತಡೆಯಲು ಸರ್ಕಾರ ಯಾವ ಕ್ರಮಕೈಗೊಂಡಿದೆ ;

(ಇ) ಗಣಿಗಾರಿಕೆಯಿಂದ ಪ್ರಾದೇಶಿಕ, ಭೌಗೋಳಿಕ ಪರಿಸರದ ಮೇಲೆ ಹಾನಿಯಾಗಿರುವುದು ಮತ್ತು ಅಲ್ಲಿ ವಾಸಿಸುತ್ತಿರುವ ಜನರು ಕಾಯಿಲೆಗಳಿಂದ ಬಳಲುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಕುರಿತು ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಈ) ಗಣಿ ಕಾರ್ಮಿಕರಿಗೆ ಯಾವ ಯಾವ ಸೌಲಭ್ಯಗಳನ್ನು ನೀಡಲಾಗುತ್ತಿದೆ; ಗಣಿಗಾರಿಕೆ ಸಮಯದಲ್ಲಿ ಸುರಕ್ಷಾ ಉಪಕರಣಗಳನ್ನು ಬಳಸಲಾಗುತ್ತದೆಯೇ ; ಯಾವ ಯಾವ ರೀತಿಯ ಸುರಕ್ಷಾ ಉಪಕರಣಗಳನ್ನು ಬಳಸಲಾಗುತ್ತಿದೆ ;

(ಉ) ಗಣಿಗಾರಿಕೆಯಿಂದ ರಾಜ್ಯಕ್ಕೆ ಎಷ್ಟು ಮೊತ್ತದ ತೆರಿಗೆ ಸಂಗ್ರಹವಾಗುತ್ತಿದೆ? (ಗಣಿಗಾರಿಕೆವಾರು, ಜಿಲ್ಲಾವಾರು ಮಾಹಿತಿ ನೀಡುವುದು)